**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-EXAM0ECS2/132/2025 (1989262)

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ: 25.02.2026.

**ಸುತ್ತೋಲೆ**

ವಿಷಯ: ನವೆಂಬರ್/ಡಿಸೆಂಬರ್ 2025 ರ ಡಿಪ್ಲೋಮಾ ಸೆಮಿಸ್ಟರ್ ಸಿ-03, ಸಿ-09, ಸಿ-15, ಸಿ-20 & ಸಿ-25 ಪಠ್ಯಕ್ರಮಗಳ ಪರೀಕ್ಷೆಯ ಮೌಲ್ಯಮಾಪನವಾದ ಥಿಯರಿ ಉತ್ತರ ಪತ್ರಿಕೆಗಳ scanned ಫೋಟೋ ಪ್ರತಿ ನೀಡುವುದು/ಮರು ಮೌಲ್ಯಮಾಪನ ಮಾಡುವ ಕುರಿತು.

ಉಲ್ಲೇಖ:
1. ಈ ಕಛೇರಿ ಸುತ್ತೋಲೆ ಸಂಖ್ಯೆ: DTE-EXAM0ECS2/132/2025 (1989262), ದಿನಾಂಕ: 16.02.2026.
2. ಈ ಕಛೇರಿ ಸುತ್ತೋಲೆ ಸಂಖ್ಯೆ: DTE-EXAM0ECS2/132/2025 (1989262), ದಿನಾಂಕ: 21.02.2026.

*-*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ಮತ್ತು (2) ರ ಸುತ್ತೋಲೆಗಳನ್ವಯ ನವೆಂಬರ್/ಡಿಸೆಂಬರ್ 2025 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಥಿಯರಿ ಉತ್ತರ ಪತ್ರಿಕೆಗಳ scanned ಫೋಟೋ ಪ್ರತಿ ನೀಡಲು ಮತ್ತು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಗಳನ್ನು ನಿಗದಿಪಡಿಸಿ ವಿದ್ಯಾರ್ಥಿಗಳಿಗೆ ಅವಕಾಶ ನೀಡಲಾಗಿತ್ತು.

ಪ್ರಸ್ತುತ ಹಲವಾರು ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಪಡೆಯಲು ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಕೋರಿರುತ್ತಾರೆ.

ಪ್ರಯುಕ್ತ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ C-03, C-09, C-15, C-20 & C-25 ಪಠ್ಯಕ್ರಮಗಳ ಎಲ್ಲಾ ವಿದ್ಯಾರ್ಥಿಗಳಿಗೂ ಮೌಲ್ಯಮಾಪನವಾದ ಥಿಯರಿ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಪಡೆಯಲು ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ದಿನಾಂಕವನ್ನು **28.02.2026** ರವರೆಗೆ **ವಿಸ್ತರಿಸಲಾಗಿದೆ**. ಮುಂದೆ ಯಾವುದೇ ಕಾರಣಕ್ಕೂ ಕಾಲಾವಕಾಶವನ್ನು ವಿಸ್ತರಿಸಲಾಗುವುದಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ. ಈ ವಿಷಯದಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ಕಾರ್ಯದರ್ಶಿ 25/2/26
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ:

ರಾಜ್ಯದ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮುಂದಿನ ಅಗತ್ಯ ಕ್ರಮಕ್ಕಾಗಿ ಮತ್ತು ತರಗತಿಗಳಲ್ಲಿ ಸುತ್ತೋಲಿಸಲು/ಸೂಚನಾ ಫಲಕದಲ್ಲಿ ಪ್ರಕಟಿಸಲು.

ಪ್ರತಿ:

1. ಶ್ರೀ ಹರೀಶ ಶೆಟ್ಟಿ, ಪ್ರಾಚಾರ್ಯರು, ಕರ್ನಾಟಕ (ಸರ್ಕಾರಿ) ಪಾಲಿಟೆಕ್ನಿಕ್, ಮಂಗಳೂರು.
2. PMU: ಇ-ತಾಂತ್ರಿಕ (DTE-EMS) ತಂತ್ರಾಂಶ ಅಭಿವೃದ್ಧಿ ತಂಡ – ಮಾಹಿತಿಗಾಗಿ.